All India Radio: Bangalore
Regional Bulletin In Kannada
18.01.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮುಡಾ ಹಗರಣ ; ೩೦೦ ಕೋಟಿ ರೂಪಾಯಿ ಮೌಲ್ಯದ ೧೪೨ ಸ್ಥಿರಾಸ್ತಿ ಮುಟ್ಟುಗೋಲು ಹಾಕಿದ ಜಾರಿ ನಿರ್ದೇಶನಾಲಯ
- ಮೈಸೂರು ಭೂ-ಹಗರಣ ; ಮುಖ್ಯಮಂತ್ರಿ ರಾಜೀನಾಮೆಗೆ ಬಿಜೆಪಿ ಆಗ್ರಹ
- ರಾಜ್ಯದ ಕೃಷಿ, ಗ್ರಾಮೀಣಾ ಕಂದಾಯ ಸಚಿವರೊಂದಿಗೆ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಪ್ರಗತಿ ಪರಿಶೀಲನಾ ಸಭೆ
- ಸುವರ್ಣ ಸೌಧದಲ್ಲಿ ಗಾಂಧಿ ಪ್ರತಿಮೆ ಅನಾವರಣದ ವೇಳೆ ಸ್ವಾತಂತ್ರ್ಯ ಹೋರಾಟಗಾರರಿಗೂ ಆಹ್ವಾನ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

<><><><>

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ರಿಯಲ್ ಎಸ್ಟೇಟ್ ಉದ್ಯಮಿಗಳ ಹೆಸರಿನಲ್ಲಿ ನೋಂದಣಿಯಾಗಿದ್ದ ೩೦೦ ಕೋಟಿ ರೂಪಾಯಿ ಮೌಲ್ಯದ  ೧೪೨ ಸ್ಥಿರಾಸ್ತಿಯನ್ನು ಜಾರಿ ನಿರ್ದೇಶನಾಲಯ ಮುಟ್ಟುಗೋಲು ಹಾಕಿಕೊಂಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ತಮ್ಮ ರಾಜಕೀಯ ಪ್ರಭಾವ ಬಳಸಿಕೊಂಡು ೩ ಎಕರೆ ಭೂಮಿಗೆ ಬದಲಾಗಿ ಪತ್ನಿಯ ಹೆಸರಿನಲ್ಲಿ ೧೪ ನಿವೇಶನಗಳ ರೂಪದಲ್ಲಿ ಪರಿಹಾರ ಪಡೆದಿದ್ದಾರೆ ಎಂದು ಇಡಿ ಆರೋಪಿಸಿದೆ. ಇದರ ಜೊತೆಗೆ ರಿಯಲ್ ಎಸ್ಟೇಟ್ ಉದ್ಯಮಿಗಳಿಗೆ ಪರಿಹಾರವಾಗಿ ಅಕ್ರಮವಾಗಿ ಭೂಮಿ ಮಂಜೂರು ಮಾಡಲಾಗಿದೆ ಎಂದು ಇಡಿ ಹೇಳಿದೆ.

<><><><>

ಮುಡಾ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯದ ತನಿಖೆಯು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಭ್ರಷ್ಟಾಚಾರವನ್ನು ಬಯಲು ಮಾಡಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ಸಿದ್ದರಾಮಯ್ಯ ಅವರು, ಪತ್ನಿಯ ಹೆಸರಿನಲ್ಲಿ ಮುಡಾ ನಿವೇಶನಗಳನ್ನು ಅಕ್ರಮವಾಗಿ ಹಂಚಿಕೆ ಮಾಡಿದ್ದು, ಸಿಬಿಐ ತನಿಖೆಗೆ ಒತ್ತಾಯಿಸಿದ್ದಾರೆ. ಇದೇ ವೇಳೆ ಮುಖ್ಯಮಂತ್ರಿಯವರ ರಾಜೀನಾಮೆಗೆ ಆಗ್ರಹಿಸಿದ್ದಾರೆ. ಇನ್ನೊಂದೆಡೆ ಮೈಸೂರು-ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ನವರು ನೈತಿಕ ಹೊಣೆ ಹೊತ್ತು ಕೂಡಲೇ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

<><><><>

ಕೇಂದ್ರ ಸರ್ಕಾರ ಮಂಜೂರು ಮಾಡಿದ ಹಣವನ್ನು ರಾಜ್ಯ ಸರ್ಕಾರ ಇನ್ನು ಬಳಸಿಕೊಂಡಿಲ್ಲ ಎಂದು ಕೇಂದ್ರ ಕೃಷಿ, ರೈತ ಕಲ್ಯಾಣ ಮತ್ತು ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ರಾಜ್ಯದ ಕೃಷಿ, ಗ್ರಾಮೀಣ ಮತ್ತು ಕಂದಾಯ ಸಚಿವರೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಅಡಕೆ ಬೆಳೆಗಾರರನ್ನು ಭೇಟಿ ಮಾಡಲು ಶಿವಮೊಗ್ಗಕ್ಕೆ ತೆರಳುವುದಾಗಿ ತಿಳಿಸಿದ್ದಾರೆ. ಕಂದಾಯ ಸಚಿವರ ಕೋರಿಕೆಯಂತೆ ರಾಜ್ಯಕ್ಕೆ ೯೭ ಕೋಟಿ ರೂಪಾಯಿಗಳ ಹೆಚ್ಚುವರಿ ಅನುದಾನ ಒದಗಿಸಲಾಗುವುದು ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ೨ ಲಕ್ಷ ೫೭ ಸಾವಿರದ ೨೪೬ ಮನೆಗಳ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಸೆಪ್ಟೆಂಬರ್‌ನಲ್ಲಿ ಅನುಮೋದನೆ ನೀಡಿದೆ. ಈಗ ಈ ಸಂಖ್ಯೆಯನ್ನು ೪ ಲಕ್ಷ ೬೭ ಸಾವಿರದ ೫೮೦ಕ್ಕೆ ಹೆಚ್ಚಿಸಲಾಗಿದೆ. ಪ್ರತಿ ಬಡವರಿಗೆ ಸೂರು ಕಲ್ಪಿಸುವುದು ಪ್ರಧಾನಿ ನರೇಂದ್ರ ಮೋದಿ ಅವರ ಸಂಕಲ್ಪವಾಗಿದೆ ಎಂದು ಹೇಳಿದ್ದಾರೆ. ೨೦೪೭ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತ್ನ ನಿರ್ಮಾಣ ಮಾಡಲು ಕರ್ನಾಟಕದ ಕೊಡುಗೆಯೂ ಅಗತ್ಯ ಎಂದು ಪ್ರತಿಪಾದಿಸಿದ್ದಾರೆ. ಸಭೆಯಲ್ಲಿ ಸಚಿವರಾದ ಎನ್. ಚೆಲುವರಾಯಸ್ವಾಮಿ, ಪ್ರಿಯಾಂಕ್ ಖರ್ಗೆ, ಕೃಷ್ಣ ಬೈರೇಗೌಡ, ಸಂಸದ ಬಿ.ವೈ. ರಾಘವೇಂದ್ರ ಹಾಗೂ ಹಿರಿಯ ಅಧಿಕಾರಿಗಳು ಸೇರಿದಂತೆ ಹಲವರು ಉಪಸ್ಥಿತರಿದ್ದರು.

<><><><>

ಬೆಳಗಾವಿಯ ಸುವರ್ಣ ವಿಧಾನಸೌಧದ ಆವರಣದಲ್ಲಿ ಇದೇ ೨೧ ರಂದು ಮಹಾತ್ಮ ಗಾಂಧೀಜಿ ಪ್ರತಿಮೆ ಅನಾವರಣ ಆಗಲಿದ್ದು, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸ್ಥಳಕ್ಕೆ ಭೇಟಿ ನೀಡಿ ಪೂರ್ವಸಿದ್ಧತೆ ಪರಿಶೀಲನೆ ನಡೆಸಿದರು. ಬಳಿಕ ಮಾತನಾಡಿದ ಡಿ.ಕೆ. ಶಿವಕುಮಾರ್ ಇದು ಸರ್ಕಾರಿ ಕಾರ್ಯಕ್ರಮವಾಗಿದ್ದು, ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಎಲ್ಲ ಪಕ್ಷದ ಶಾಸಕರ ಜೊತೆಗೆ ಸ್ವಾತಂತ್ರ್ಯ ಹೋರಾಟಗಾರರಿಗೂ ಆಹ್ವಾನ ನೀಡಲಾಗುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಇಡಿ ತನಿಖೆ ಕುರಿತಂತೆ ಪ್ರತಿಕ್ರಿಯಿಸಿ ಇದು ರಾಜಕೀಯ ಪಿತೂರಿ ಎಂದು ತಿಳಿಸಿದ್ದಾರೆ.

<><><><>

ಕಾರ್ಯನಿರತ ಪತ್ರಕರ್ತರ ಸಂಘ ತುಮಕೂರು, ಸಿದ್ಧಾರ್ಥ ತಾಂತ್ರಿಕ ವಿಶ್ವ ವಿದ್ಯಾಲಯದಲ್ಲಿ ಆಯೋಜಿಸಿದ್ದ ಪತ್ರಕರ್ತರ ೩೯ನೇ ರಾಜ್ಯ ಸಮ್ಮೇಳನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಉದ್ಘಾಟಿಸಿದರು. ಗೃಹ ಸಚಿವ ಡಾ. ಜಿ.ಪರಮೇಶ್ವರ್, ಸಹಕಾರಿ ಸಚಿವ ಕೆ.ಎನ್.ರಾಜಣ್ಣ, ರಾಜ್ಯ ಸರಕಾರದ ದೆಹಲಿ ಪ್ರತಿನಿಧಿ ಟಿ.ಬಿ.ಜಯಚಂದ್ರ, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಸೇರಿದಂತೆ  ಹಲವು ಮುಖಂಡರು ಉಪಸ್ಥಿತರಿದ್ದರು. ಇದಕ್ಕೂ ಮೊದಲು ಸಮ್ಮೇಳನದ ಆವರಣದಲ್ಲಿ ಆಯೋಜಿಸಿದ್ದ ಸ್ಟಾಲ್ ಗಳನ್ನು ವೀಕ್ಷಿಸಿದ ಮುಖ್ಯಮಂತ್ರಿಯವರು ಮಹಿಳಾ ಸ್ವ-ಸಹಾಯ ಸಂಘಗಳು ಸಿದ್ಧಪಡಿಸಿದ ತಿಂಡಿ ಸವಿದರು.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ಮೂಲಕ ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಚಿಂತನೆಗಳನ್ನು ಹಂಚಿಕೊಳ್ಳಲಿದ್ದಾರೆ.  ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೧೮ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ. ಅಲ್ಲದೆ ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ  ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಯಲ್ಲಿ ಕಾರ್ಯಕ್ರಮವನ್ನು ಪ್ರಸಾರವಾಗಲಿದೆ.

<><><>

ನಮ್ಮ ಮೆಟ್ರೋ ನೇರಳ ಮಾರ್ಗದಲ್ಲಿ ಹಳಿ ನಿರ್ವಹಣಾ ಕಾಮಗಾರಿ ನಡೆಯುವುದರಿಂದ ನಾಳೆ ಬೆಳಗ್ಗೆ ೭ರಿಂದ ಬೆಳಗ್ಗೆ ೧೦ರವರೆಗೆ ಕೆಂಪೇಗೌಡ ಮೆಜೆಸ್ಟಿಕ್‌ನಿಂದ ಇಂದಿರಾನಗರದವರೆಗೆ ಮೆಟ್ರೋ ರೈಲು ಸಂಚಾರ ಸ್ಥಗಿತಗೊಳ್ಳಲಿದೆ. ನೇರಳೆ ಮಾರ್ಗದಲ್ಲಿ ಚಲ್ಲಘಟ್ಟ - ನಾಡಪ್ರಭು ಕೆಂಪೇಗೌಡ ನಿಲ್ದಾಣ ಮೆಜೆಸ್ಟಿಕ್ ಹಾಗೂ ವೈಟ್‌ಫೀಲ್ಡ್ - ಇಂದಿರಾನಗರ ಮೆಟ್ರೋ ನಿಲ್ದಾಣಗಳ ನಡುವೆ ಬೆಳಗ್ಗೆ ೭ ರಿಂದಲೇ ಮೆಟ್ರೋ ಸಂಚಾರ ಇರಲಿದೆ ಎಂದು ಬಿಎಂಆರ್‌ಸಿಎಲ್ ಪ್ರಕಟಣೆಯಲ್ಲಿ ತಿಳಿಸಿದೆ.

<><><>

ಸ್ವಾಮಿತ್ವ ಯೋಜನೆ ಮೂಲಕ ಧಾರವಾಡ ಜಿಲ್ಲೆಯ ೩೭೫ ಗ್ರಾಮಗಳನ್ನು ಡ್ರೋನ್ ಮೂಲಕ ಸರ್ವೆ ಮಾಡಿ, ಆಸ್ತಿಯನ್ನು ನಿಖರವಾಗಿ ಗುರುತಿಸಲು ನಿರ್ಧರಿಸಲಾಗಿದೆ. ಇದಕ್ಕೆ ಗ್ರಾಮಸ್ಥರ

ಹಾಗೂ ಗ್ರಾಮ ಪ್ರತಿನಿಧಿಗಳ ಸಹಕಾರ ಅಗತ್ಯ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ತಿಳಿಸಿದ್ದಾರೆ. ಧಾರವಾಡ ಜಿಲ್ಲೆಯ ಕಲಘಟಗಿ ತಾಲೂಕಿನ ಮಡಕಿಹೊನ್ನಳ್ಳಿ ಗ್ರಾಮದಲ್ಲಿ ಸ್ವಾಮಿತ್ವ ಯೋಜನೆಯಡಿ ಡ್ರೋನ್ ಸರ್ವೆ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಇದು ನೂತನ ಯೋಜನೆ ಆಗಿರುವುದರಿಂದ ಸಮಸ್ಯೆ ಸಹಜ. ಹೀಗಾಗಿ ಊರಿನ ಪ್ರಮುಖರು, ಜನಪ್ರತಿನಿಧಿಗಳು ಸಹಕಾರ ನೀಡಿ ಸಮಸ್ಯೆ ಬಗೆ ಹರಿಸಬೇಕು ಎಂದು ತಿಳಿಸಿದ್ದಾರೆ. ಡ್ರೋನ್ ಮೂಲಕ ಏರೀಯಲ್ ಸರ್ವೆ ಹಾಗೂ ರೊವರ್ ಸರ್ವೆ ಎರಡನ್ನು ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಗದಗ ಬೆಟಗೇರಿ ಅವಳಿ ನಗರ ಸೇರಿದಂತೆ ಜಿಲ್ಲೆಯ ಹಲವಾರು ಗ್ರಾಮಗಳಿಗೆ ಕುಡಿಯುವ ನೀರಿನ ಸರಬರಾಜು ಆಗುವ ಮುಂಡರಗಿ ತಾಲೂಕಿನ ಸಿಂಗಟಾಲೂರ ಬ್ಯಾರೇಜ್ ಗೆ ಗದಗ ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ತುಂಗಾ ಭದ್ರ ನದಿಯ ನೀರಿನ ಮಟ್ಟ ಹಾಗೂ ನಿರೆತ್ತುವ ಸ್ಥಳದ ಕುರಿತು ಮಾಹಿತಿ ಪಡೆದರು. ಈ ಸಂದರ್ಭದಲ್ಲಿ ಮುಂಡರಗಿ ತಹಶೀಲ್ದಾರ್ ಸೇರಿದಂತೆ ತಾಲೂಕಿನ ಇತರೆ ಸಿಬ್ಬಂದಿ ಹಾಜರಿದ್ದು, ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

<><><>

ಸರ್ಕಾರವು ಮಹಿಳೆಯರ ಆರೋಗ್ಯ ದೃಷ್ಟಿಯಿಂದ ಅನೇಕ ಯೋಜನೆಗಳನ್ನು ರೂಪಿಸಿದ್ದು ಅವುಗಳ ಸಮರ್ಪಕ ಬಳಕೆಯಾಗಬೇಕು ಎಂದು ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಶಾಸಕ ಆರ್. ವಿ. ದೇಶಪಾಂಡೆ ತಿಳಿಸಿದ್ದಾರೆ. ಉತ್ತರಕನ್ನಡ ಜಿಲ್ಲೆಯ ಹಳಿಯಾಳದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆಶ್ರಯದಲ್ಲಿ ಪೌಷ್ಠಿಕಾಂಶ ಕಿಟ್, ಭಾಗ್ಯಲಕ್ಷ್ಮಿ ಹಾಗೂ ಸುಕನ್ಯಾ ಸಮೃದ್ಧಿ ಯೋಜನೆಯಡಿ ಫಲಾನುಭವಿಗಳಿಗೆ ಪಾಸ್ ಬುಕ್ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬರೂ ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

<><><>

ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ಸಹಯೋಗದಲ್ಲಿ ನಾಳೆ ಬೆಳಗ್ಗೆ ೧೦ ಗಂಟೆಗೆ ಬೃಹತ್ ಕ್ಯಾನ್ಸರ್ ತಪಾಸಣಾ ಶಿಬಿರ ಮತ್ತು ಕ್ಯಾನ್ಸರ್ ಅರಿವು ಕಾರ್ಯಕ್ರಮವನ್ನು ಚಿಕ್ಕಬಳ್ಳಾಪುರದಲ್ಲಿ ಹಮ್ಮಿಕೊಳ್ಳಲಾಗಿದೆ. ಚಿಕ್ಕಬಳ್ಳಾಪುರ ನಗರದ ಒಕ್ಕಲಿಗರ ಕಲ್ಯಾಣ ಮಂಟಪದಲ್ಲಿ ನಡೆಯಲಿರುವ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರದ ಪ್ರಯೋಜನವನ್ನು ಆಸಕ್ತ ಸಾರ್ವಜನಿಕರು ಪಡೆದುಕೊಳ್ಳಬೇಕು. ಈಗಾಗಲೇ ೧ ಸಾವಿರದ ೨೦೦ ಕ್ಕೂ ಹೆಚ್ಚು

ಮಹಿಳೆಯರು ತಪಾಸಣೆಗೆ ಹೆಸರು ನೊಂದಾಯಿಸಿಕೊಂಡಿದ್ದಾರೆ ಎಂದು ಶಿಬಿರದ ಆಯೋಜಕರು ತಿಳಿಸಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು-೧

- ಹಾವೇರಿ ಜಿಲ್ಲೆಯ ಮೂರು ಕೇಂದ್ರಗಳಲ್ಲಿ ನಾಳೆ ಹಾಗೂ ಇದೇ ೨೫ ರಂದು ಕರ್ನಾಟಕ ಲೋಕಸೇವಾ ಆಯೋಗದಿಂದ ವಿವಿಧ ಇಲಾಖೆಗಳ ಗ್ರೂಪ್ ಬಿ ವೃಂದದ ಸ್ಪರ್ಧಾತ್ಮಕ ಪರೀಕ್ಷೆಗಳು ಜರುಗಲಿದೆ. ಪಾರದರ್ಶಕವಾಗಿ ಪರೀಕ್ಷೆ ನಡೆಸುವಂತೆ ಅಧಿಕಾರಿಗಳಿಗೆ ಹೆಚ್ಚುವರಿ ಜಿಲ್ಲಾಧಿಕಾರಿ ಡಾ.ಎಲ್.ನಾಗರಾಜ್ ಸೂಚಿಸಿದ್ದಾರೆ.
- ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ನಡೆಯುತ್ತಿರುವ ಫಲಪುಷ್ಪ ಪ್ರದರ್ಶನದಲ್ಲಿ ಇಂದು ಇಕೆಬಾನ, ಪುಷ್ಪಭಾರತಿ, ಪುಷ್ಪ ರಂಗೋಲಿ, ತರಕಾರಿ ಕೆತ್ತನೆ, ಡಚ್ ಹೂವಿನ ಜೋಡಣೆ, ಥಾಯ್‌ಆರ್ಟ್ ಮತ್ತು ಬೋನ್ಸಾಯ್ ಗಿಡಗಳ ಪ್ರದರ್ಶನದ ಉದ್ಘಾಟನೆಯನ್ನು ಚಲನಚಿತ್ರ ನಟಿ ಪ್ರೇಮ ಉದ್ಘಾಟಿಸಿದರು.
- ಉತ್ತರಕನ್ನಡ ಜಿಲ್ಲೆಯ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯು ಡಿಸೆಂಬರ್-೨೦೨೪ ರ ಅಂತ್ಯದವರೆಗೆ ಯುಪಿಐ ವಹಿವಾಟಿನಿಂದ ಒಟ್ಟು ೭೬ ಕೋಟಿ ೩೮ ಲಕ್ಷ ರೂಪಾಯಿ ಸಂಗ್ರಹಿಸಿದೆ ಎಂದು ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಎಂ.ಪ್ರಿಯಾಂಗಾ ತಿಳಿಸಿದ್ದಾರೆ.
- ಉತ್ತರಕನ್ನಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಮಹಾಯೋಗಿ ವೇಮನ ಜಯಂತಿಯನ್ನು ನಾಳೆ ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>